ಮಾಧ್ಯಮ ಮಾಹಿತಿ:

ಮಹದೇವಪುರ ವಲಯದಲ್ಲಿನ ಅನಧಿಕೃತ ಅಂಗಡಿ ಮಳಗೆಗಳ ಒತ್ತುವರಿ ತೆರವು ಕಾರ್ಯಾಚರಣೆ ನಡೆಸಿರುವ ಬಗ್ಗೆ:

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕೆ.ಆರ್.ಪುರಂ ವಿಭಾಗದ ವಾರ್ಡ್-52 ರಲ್ಲಿ ಬರುವ ಓಲ್ಡ್ ಮದ್ರಾಸ್ ರಸ್ತೆಯ ಐಟಿಐ ಗೇಟಿನಿಂದ ಸರ್ಕಾರಿ ಆಸ್ಪತ್ರೆವರೆಗೆ ದಿನಾಂಕ: 14-12-2020 ರಂದು ಅನಧಿಕೃತ ಅಂಗಡಿ ಮಳಗೆಗಳ ಒತ್ತುವರಿ ತೆರವು ಕಾರ್ಯಾಚರಣೆಯನ್ನು ಉಪವಿಭಾಗ ಮಟ್ಟದ ಸಹಾಯಕ ಕಾರ್ಯಪಾಲಕ ಅಭಿಯಂತರರು ನಾಗಪ್ಪ ಕಮಟಿ ಹಾಗೂ ಸಹಾಯಕ ಅಭಿಯಂತರರಾದ ಜಗದೀಶ್.ಎಂ. ರವರ ನೇತೃತ್ವದಲ್ಲಿ ಹಮ್ಮಿಕೊಳ್ಳಲಾಗಿರುತ್ತದೆ. ಸದರಿ ಕಾರ್ಯಾಚರಣೆಯಲ್ಲಿ ಒಟ್ಟು 33 ತಾತ್ಕಾಲಿಕ ಅಂಗಡಿ ಮಳಗೆಗಳ ಒತ್ತುವರಿಯನ್ನು ತೆರವುಗೊಳಿಸಲಾಗಿದೆ ಎಂದು ಮಹದೇವಪುರ ವಲಯದ ಮುಖ್ಯ ಅಭಿಯಂತರರು ಆರ್.ಎಲ್.ಪರಮೇಶ್ವರಯ್ಯ ರವರು ತಿಳಿಸಿದ್ದಾರೆ. ಮುಂದುವರಿದು ಸದರಿ ಕಾರ್ಯಾಚರಣೆಯನ್ನು ಇತರೆ ವಾರ್ಡ್‌ಗಳಲ್ಲಿಯೂ ಸಹ ಹಮ್ಮಿಕೊಳ್ಳಲಾಗುವುದೆಂದು ತಿಳಿಸಿರುತ್ತಾರೆ.